ಬೀದರ್ ಡಿ.ಸಿ.ಸಿ. ಬ್ಯಾಂಕ್

99(185); ಶ್ರೀ ಪ್ರಭು ಬಿ. ಚೌವ್ಹಾಣ್

ಅ) ಬೀದರ್ ಡಿ.ಸಿ.ಸಿ. ಬ್ಯಾಂಕಿನ ನಿರ್ದೇಶಕ ಮಂಡಳಿಯ ಚುನಾವಣೆಯು 13.112013ರಂದು ನಡೆದಿದ್ದು ಅಧ್ಯಕ್ಷರು ಹಾಗೂ ನಿರ್ದೇಶಕರ ವಿರುದ್ಧ ಅವ್ಯವಹಾರದ ಆರೋಪವಿದ್ದು ಸಹಕಾರ ಸಂಘಗಳ ಕಾಯ್ದೆ 1959ರಡಿಯಲ್ಲಿ ಅನರ್ಹರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಯಾವ ಆದಾರದಲ್ಲಿ ಹಾಲಿ ಅಧ್ಯಕ್ಷರನ್ನು ಮತ್ತು ನಿರ್ದೇಶಕರನ್ನು ಮರು ಚುನಾವಣೆಗೆ ಸ್ಪರ್ಧಿಸಲು ಅವಕಾಶ ಕಲ್ಪಿಸಿದೆ;

ಇ) ಬೀದರ್ ಜಿಲ್ಲೆಯಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಗುರುಪಾದಪ್ಪ ನಾಗಮಾರಪಲ್ಲಿ ಮಲ್ಟಿ ಸ್ಪೆಷಾಲಿಟಿ ಕೋ-ಆಪರೇಟಿವ್ ಆಸ್ಪತ್ರೆಗೆ ರೈತರಿಂದ ಹಣ ಸಂಗ್ರಹ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಈ ಆಸ್ಪತ್ರೆ ನೋಂದಣಿಯಾಗದೇ ಇರುವುದರಿಂದ ಷೇರು ಸಂಗ್ರಹ ಕಾನೂನು ಬಾಹಿರವಾಗಿದ್ದು, ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ?

ಉ) ಆಸ್ಪತ್ರೆಗೆ ಷೇರು ಸಂಗ್ರಹಣೆ ನಡೆಸಲಾಗಿದ್ದು, ಎಷ್ಟು ಜನ ರೈತರಿಗೆ ಷೇರು ಪ್ರಮಾಣಪತ್ರವನ್ನು ನೀಡಲಾಗಿದೆ ಮತ್ತು ಸಂಗ್ರಹಿಸಲಾದ ಷೇರು ಮೊತ್ತವೆಷ್ಟು?

ಊ) ಆಸ್ಪತ್ರೆ ನೋಂದಣಿ ಪೂರ್ವದಲ್ಲೇ ಕಾನೂನುಬಾಹಿರವಾಗಿ ಷೇರು ಸಂಗ್ರಹಿಸಿದ್ದು, ರೈತರಿಗೆ ಷೇರು ಹಣ ಹಿಂತಿರುಗಿಸುವ ಕುರಿತು ಸರ್ಕಾರವು ಯಾವು ಕ್ರಮಗಳನ್ನು ಕೈಗೊಂಡಿದೆ?

ಶ್ರೀ ಹೆಚ್.ಎಸ್. ಮಹದೇವ ಪ್ರಸಾದ್ (ಸಹಕಾರ ಸಚಿವರು)

ಅ) ಬೀದರ್ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಆಡಳಿತ ಮಂಡಳಿ ಚುನಾವಣೆಯು ದಿನಾಂಕ: 13–11–2013 ರಂದು ನಡೆದಿರುತ್ತದೆ.

ಬ್ಯಾಂಕಿನ ಅಧ್ಯಕ್ಷರು ಹಾಗೂ ನಿರ್ದೇಶಕರ ವಿರುದ್ಧ ಅವ್ಯವಹಾರಗಳ ಆರೋಪಗಳಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಬ್ಯಾಂಕಿನ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಸ್ಪರ್ಧಿಸಿದ ನಿರ್ದೇಶಕರುಗಳನ್ನು ಹಾಗೂ ಅಧ್ಯಕ್ಷರನ್ನು ಚುನಾವಣೆ ನಡೆಯುವ ಪೂರ್ವದಲ್ಲಿ ಕರ್ನಾಟಕ ಸಹಕಾರ ಸಂಘಗಳ ಅದಿನಿಯಮ 1959ರ ಪ್ರಕರಣ 29ಸಿ ರಡಿ ಅನರ್ಹಗೊಳಿಸಿ ಆದೇಶಿಸಿಲ್ಲವಾದ್ದರಿಂದ ಈ ವ್ಯಕ್ತಿಗಳು ಚುನಾವಣೆಯಲ್ಲಿ ಸ್ಪರ್ಧಿಸಿ ಬ್ಯಾಂಕಿನ ನಿರ್ದೇಶಕರುಗಳಾಗಿ ಆಯ್ಕೆಯಾಗಿರುತ್ತಾರೆ.

ಇ) ಬೀದರ್ ಜಿಲ್ಲೆಯಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಗುರುಪಾದಪ್ಪ ನಾಗಮಾರಪಲ್ಲಿ ಮಲ್ಟಿಸ್ಪೆಷಾಲಿಟಿ ಕೋ–ಆಪರೇಟಿವ್ ಆಸ್ಪತ್ರೆಗೆ ರೈತರಿಂದ ಹಣ ಸಂಗ್ರಹ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ) ಉದ್ದೇಶಿತ ನೋಂದಣಿ ಆಸ್ಪತ್ರೆಗೆ ಷೇರು ಸಂಗ್ರಹ ಮಾಡಿರುವ ಬಗ್ಗೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 64ರಡಿ ವಿಚಾರಣೆಗೆ ಆದೇಶ ಹೊರಡಿಸಿದ್ದು, ಸಹಕಾರ ಸಂಘಗಳ ಉಪ ನಿಬಂಧಕರು, ಗುಲ್ಬರ್ಗಾ ಜಿಲ್ಲೆ, ಗುಲ್ಬರ್ಗಾ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದೆ. ವಿಚಾರಣಾ ವರದಿ ಬಂದ ನಂತರ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು.

ಉ) ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 64ರಡಿಯಲ್ಲಿ ವಿಚಾರಣೆ ನಡೆಯುತ್ತಿದ್ದು ಅಂತಿಮ ವರದಿ ಬಂದ ನಂತರ ಎಷ್ಟು ರೈತರಿಂದ ಷೇರು ಹಣ ಸಂಗ್ರಹಣೆ ಮಾಡಲಾಗಿದೆ

ಮತ್ತು ಷೇರು ಪ್ರಮಾಣ ಪತ್ರ ನೀಡಲಾಗಿದೆ ಎಂಬುದನ್ನು ಖಚಿತಗೊಳಿಸಿಕೊಳ್ಳಲಾಗುವುದು.

ಊ) ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 64ರ ವಿಚಾರಣಾ ವರದಿ ಬಂದ ನಂತರ ಕಾನೂನು ರೀತ್ಯಾ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಬೀದರ್ ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳು

101(187); ಶ್ರೀ ಪ್ರಭು ಬಿ. ಚೌವ್ಹಾಣ್ (ಔರಾದ್)

ಅ) ಲೋಕೋಪಯೋಗಿ ಇಲಾಖೆಯ ವತಿಯಿಂದ ಬೀದರ್ ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳಾವುವು; ಅವುಗಳಿಗೆ ಮೀಸಲಿಟ್ಟ ಹಣವೆಷ್ಟು (ತಾಲ್ಲೂಕುವಾರು, ಕಾಮಗಾರಿವಾರು ವಿವರ ಒದಗಿಸುವುದು);

ಆ) ಜಿಲ್ಲೆಯಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳಾವುವು; ಅವುಗಳ ರೂಪರೇಷೆಗಳೇನು (ತಾಲ್ಲೂಕುವಾರು, ಯೋಜನಾವಾರು ವಿವರ ಒದಗಿಸುವುದು);

ಇ) ಔರಾದ್ ವಿಧಾನಸಭಾ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಗೆ ಹೊಸ ಪ್ರಸ್ತಾವನೆಗಳೇನಾದರೂ ಬಂದಿವೆಯೇ; ಹಾಗಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು)?

ಡಾ॥ ಹೆಚ್.ಸಿ. ಮಹದೇವಪ್ಪ (ಮಾನ್ಯ ಲೋಕೋಪಯೋಗಿ ಸಚಿವರು)

ಅ) ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಆ) ವಿವರಗಳನ್ನು ಅನುಬಂಧ–2 ರಲ್ಲಿ ನೀಡಲಾಗಿದೆ.